ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001.
ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ : 17-03-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದ ಹೊರರಾಜ್ಯಗಳ ವಿಶ್ವವಿದ್ಯಾನಿಲಯಗಳಲ್ಲಿ ಕನ್ನಡ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ವಿತರಣಾ ಸಮಾರಂಭ:<br><br>__ಉದ್ಘಾಟನೆ:__<br><br>ಶ್ರೀ ಆರ್. ವಿ. ದೇಶಪಾಂಡೆ, ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು.<br><br>__ವಿದ್ಯಾರ್ಥಿ ವೇತನ ವಿತರಣೆ:__<br><br>ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರು<br><br>__ಅಧ್ಯಕ್ಷತೆ:__<br><br>ಶ್ರೀ ಆರ್. ರೋಷನ್ ಬೇಗ್, ಮೂಲಸೌಲಭ್ಯ ಅಭಿವೃದ್ಧಿ, ಹಜ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಖಾತೆ ಸಚಿವರು. | **18-03-2015**<br>ಬುಧವಾರ<br>ಬೆಳಿಗ್ಗೆ<br>**11-30** ಗಂಟೆಗೆ | ಸಮ್ಮೇಳನ ಸಭಾಂಗಣ, ಕೊಠಡಿ ಸಂಖ್ಯೆ 419, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು. |
| 2. | **__Valediction of Engineering Fair:__** | **18-3-2015**<br>**Wednesday** | **VITM Auditorium, Visvesvaraya Industrial** |

| | | | |
|---|---|---|---|
| | **Lecture on MEMS sensors and applications:**<br><br>**Dr K. Natarajan, Prof. and Head of the Department M.S. Ramaiah Institute of Technology.** | **3-00 PM** | **and Technological Museum, Kasturba Road, Bengaluru.** |

**ನಿರ್ದೇಶಕರ ಪರವಾಗಿ**

# ಪತ್ರಿಕಾ ಪ್ರಕಟಣೆ

## ಮಾರ್ಚ್ 17 ರ ದ್ವಿತೀಯ ಪಿ.ಯು.ಸಿ ಪರೀಕ್ಷೆ ಮುಂದೂಡಿಕೆ

**ಬೆಂಗಳೂರು, ಮಾರ್ಚ್ 17, (ಕರ್ನಾಟಕ ವಾರ್ತೆ)**

**ರಾಜ್ಯದಲ್ಲಿ ನಡೆಯಲಿರುವ ಎರಡನೇ ಪಿ.ಯು.ಸಿ. ಪರೀಕ್ಷೆಯ ಮಾರ್ಚ್ 17 ರಂದು ನಡೆಯಬೇಕಾಗಿದ್ದ ಗಣಿತ ಮತ್ತು ಭೂಗೋಳ ಶಾಸ್ತ್ರ ಪತ್ರಿಕೆಗಳ ಪರೀಕ್ಷೆಯನ್ನು ಅನಿವಾರ್ಯ ಕಾರಣಗಳಿಂದ ಮಾರ್ಚ್ 28 ರಂದು ಬೆಳಿಗ್ಗೆ 9–00 ರಿಂದ 12–15 ರವರೆಗೆ ನಡೆಸಲಾಗುವುದು ಎಂದು ಪದವಿಪೂರ್ವ ಶಿಕ್ಷಣ ಇಲಾಖೆಯ ಪ್ರಕಟಣೆ ತಿಳಿಸಿದೆ.**

**ಬಾಬು:ಜಿಪಿಆರ್.**

## ವಿದ್ಯಾರ್ಥಿ ವೇತನ ವಿತರಣಾ ಸಮಾರಂಭ

**ಬೆಂಗಳೂರು, ಮಾರ್ಚ್ 17, (ಕರ್ನಾಟಕ ವಾರ್ತೆ)**

ಕರ್ನಾಟಕದಲ್ಲಿ ನೆಲೆಸಿರುವ ಕನ್ನಡಿಗರು ಮತ್ತು ಕನ್ನಡೇತರರಲ್ಲಿ ಕನ್ನಡದ ಬಗ್ಗೆ ಜಾಗೃತಿ ಮೂಡಿಸುವುದರ ಜೊತೆಗೆ ಕನ್ನಡ ನೆಲದಲ್ಲಿ ಬದುಕನ್ನು ರೂಪಿಸಿಕೊಳ್ಳಬಯಸುವ ಜನರು ಕನ್ನಡ ಕಲಿತು ಬದುಕಬೇಕೆನ್ನುವ ಮನೋಭಾವವನ್ನು ಬೆಳೆಸುವ ಮನಪರಿವರ್ತನಾ ಕೆಲಸಕ್ಕೆ "ಕನ್ನಡ ಅಭಿವೃದ್ಧಿ ಪ್ರಾಧಿಕಾರ" ಒತ್ತು ನೀಡುತ್ತಿದೆ. ಕನ್ನಡದ ಕೆಲಸ ಒಬ್ಬರಿಂದ ಮಾಡುವ ಕೆಲಸವಲ್ಲ. ಸಮುದಾಯದ ಜೊತೆಗೂಡಿ ಮಾಡುವ ಕೆಲಸ. ಕನ್ನಡ ಅಭಿವೃದ್ಧಿ ಪ್ರಾಧಿಕಾರ ತನ್ನ ಇತಿಮಿತಿಯೊಳಗೆ ಮಾಡಬಹುದಾದ ಕೆಲಸವನ್ನು ಅರ್ಪಣಾಭಾವದಿಂದ ಬದ್ಧತೆಯಿಂದ ಮಾಡುತ್ತಾ ಬಂದಿದೆ. ಕನ್ನಡದ ಕೆಲಸ ಅನ್ಯ ಭಾಷಿಗರನ್ನು ದ್ವೇಷಿಸುವಂತಹದಲ್ಲ. ನೆರೆಹೊರೆಯ ಭಾಷಿಕರೊಡನೆ ಸೌಹಾರ್ದ ಸಾಧಿಸುವುದು. ಸಹಬಾಳ್ವೆಯಿಂದ ಬದುಕನ್ನು ಕಟ್ಟಿಕೊಳ್ಳುವುದಾಗಿದೆ.

ಕನ್ನಡದ ಬೆಳವಣಿಗೆಗಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಕನ್ನಡ ಕಾರ್ಯಗಾರ, ನ್ಯಾಯಾಂಗದಲ್ಲಿ ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ಮಾಧ್ಯಮ ಪ್ರಶಸ್ತಿ. ಹೊರನಾಡ ಕನ್ನಡಿಗರ ಸಮಾವೇಶ, ಭಾಷಾ ಭಾವೈಕ್ಯ. ಕವಿಗೋಷ್ಠಿ, ಕನ್ನಡ ನುಡಿಹಬ್ಬ, ಕನ್ನಡ ಜಾಗೃತಿ ಜಾಥಾ, ಕಾಲೇಜು ವಿದ್ಯಾರ್ಥಿಗಳಿಗೆ ಕನ್ನಡ ಜಾಗೃತಿ ಮುಂತಾದ ಹಲವು ಹತ್ತು ಕನ್ನಡ ಪರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಿ ಕನ್ನಡವನ್ನು ಜನಸಮುದಾಯದ ಸಮೀಪಕ್ಕೆ ತೆಗೆದುಕೊಂಡು ಹೋಗುವ ಪ್ರಾಮಾಣಿಕ ಹಾಗೂ ಬದ್ಧತೆಯ ಕೆಲಸ ಮಾಡುತ್ತಾ ಬಂದಿದೆ.

ಹೊರರಾಜ್ಯಗಳ ವಿಶ್ವ ವಿದ್ಯಾಲಯಗಳಲ್ಲಿ ಕನ್ನಡ ಅಧ್ಯಯನ ಕೇಂದ್ರಗಳು ಮುಚ್ಚುವ ಹಂತದಲ್ಲಿದ್ದುದನ್ನು ಮನಗಂಡ ಪ್ರಾಧಿಕಾರವು ಈ ಅಧ್ಯಯನ ಕೇಂದ್ರಗಳನ್ನು ಪುನ:ಚೇತನಗೊಳಿಸಿ ಕನ್ನಡ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡಲು ಕಳೆದ ಐದು ವರ್ಷಗಳಿಂದ ನಿರಂತರವಾಗಿ ವಿದ್ಯಾರ್ಥಿ ವೇತನವನ್ನು ನೀಡುತ್ತಾ ಬಂದಿದೆ. ಇದರಿಂದ ಹೊರರಾಜ್ಯಗಳಲ್ಲಿ ಕನ್ನಡದಲ್ಲಿ ಸ್ನಾತಕೋತ್ತರ ವ್ಯಾಸಂಗ ಮಾಡುವವರ ಸಂಖ್ಯೆ ಗಮನಾರ್ಹವಾಗಿ ಹೆಚ್ಚಾಗಿರುವುದು ಕಂಡು ಬಂದಿದೆ. ಹೊರರಾಜ್ಯದ ಏಳು ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತೀ ತಿಂಗಳು ಒಬ್ಬ ವಿದ್ಯಾರ್ಥಿಗೆ 2000/- ರೂ. ಗಳಂತೆ ವಾರ್ಷಿಕವಾಗಿ 20,000/- ಗಳ ವಿದ್ಯಾರ್ಥಿ ವೇತನವನ್ನು ನೀಡುತ್ತಾ ಬಂದಿದೆ. ಕಳೆದ ಐದು ವರ್ಷಗಳಲ್ಲಿ 451 ಹೊರರಾಜ್ಯ ಸ್ನಾತಕೋತ್ತರ ಎಂ.ಎ. ಕನ್ನಡ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗಿದೆ. ಪ್ರಸ್ತಕ ಸಾಲಿನಲ್ಲಿ 106 ವಿದ್ಯಾರ್ಥಿಗಳನ್ನು ವಿದ್ಯಾರ್ಥಿ ವೇತನಕ್ಕೆ ಆಯ್ಕೆ ಮಾಡಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವ ಆರ್. ವಿ. ದೇಶಪಾಂಡೆ ನೆರವೇರಿಸುವರು. ಮೂಲಭೂತ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಹಾಗೂ ಹಿರಿಯ ನಾಗರಿಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ವಿತರಣೆ ಮಾಡುವರು. ಮುಖ್ಯ ಅತಿಥಿಗಳಾಗಿ ಹಿರಿಯ ಸಾಹಿತಿಗಳು ಮತ್ತು ಕರ್ನಾಟಕ ಸಾಹಿತ್ಯ ಅಕಾಡೆಮಿಯ ನಿಕಟಪೂರ್ವ ಅಧ್ಯಕ್ಷ ಪ್ರೊ. ಎಂ.ಎಚ್. ಕೃಷ್ಣಯ್ಯ ಮತ್ತು ಸಾಹಿತಿಗಳು ಹಾಗೂ ಖ್ಯಾತ ಚಲನಚಿತ್ರ ನಿರ್ದೇಶಕ ಪ್ರೊ. ನಾಗತಿಹಳ್ಳಿ ಚಂದ್ರಶೇಖರ್ ಭಾಗವಹಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಸಆರ್ವಜನಿಕ ಸಂಪರ್ಕ ಇಲಾಖೆಯ ಹೆಚ್ಚುವರಿ ಅಪರ ಮುಖ್ಯ ಕಾರ್ಯದರ್ಶಿ ಮಹೇಂದ್ರ ಜೈನ್ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಎಲ್. ಹುಮಂತಯ್ಯ ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.
ಬಾಬು:ಜಿಪಿಆರ್.

## ಗ್ರಾಮ ಪಂಚಾಯಿತಿ ಚುನಾವಣೆ : ನಿಗದಿತ ಅವಧಿಯೊಳಗೆ

**ಬೆಂಗಳೂರು, ಮಾರ್ಚ್ 17, (ಕರ್ನಾಟಕ ವಾರ್ತೆ)**

ರಾಜ್ಯದ ಕೆಲವು ದಿನ ಪತ್ರಿಕೆಗಳಲ್ಲಿ ಮತ್ತು ಎಲೆಕ್ಟ್ರಾನಿಕ್ ಮೀಡಿಯಾಗಳಲ್ಲಿ, ದೂರದರ್ಶನಗಳಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಗಳು ಮೇ ತಿಂಗಳ ದಿನಾಂಕ 8 ಮತ್ತು 12 ರಂದು 2 ಹಂತಗಳಲ್ಲಿ ನಡೆಯುವುದಾಗಿ ಪ್ರಕಟಿಸಲಾಗಿದೆ.

ರಾಜ್ಯ ಚುನಾವಣಾ ಆಯೋಗವು ಇದುವರೆಗೂ ಗ್ರಾಮ ಪಂಚಾಯಿತಿಗಳ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದಿನಾಂಕವನ್ನು ನಿಗದಿಪಡಿಸಿರುವುದಿಲ್ಲ ಮತ್ತು ಪ್ರಕಟಿಸಿರುವುದಿಲ್ಲವೆಂದು ಈ ಮೂಲಕ ಸ್ಪಷ್ಟನೆ ನೀಡಲಾಗಿದೆ. ಹೆಚ್ಚಿನ ಗ್ರಾಮ ಪಂಚಾಯಿತಿಗಳ ಅವಧಿಯು ಜೂನ್ ಮತ್ತು ಜುಲೈ ಮಾಹೆಗಳಲ್ಲಿ ಮುಕ್ತಾಯವಾಗಲಿದ್ದು, ಇವುಗಳಿಗೆ ರಾಜ್ಯ ಚುನಾವಣಾ ಆಯೋಗವು ಅವಧಿಯೊಳಗೆ ಚುನಾವಣೆ ನಡೆಸಲು ಪೂರ್ವ ಸಿದ್ಧತೆಗಳನ್ನು ನಡೆಸುತ್ತಿದೆ ಎಂದು ರಾಜ್ಯ ಚುನಾವಣಾ ಆಯೋಗ ತಿಳಿಸಿದೆ.

ಬಾಬು:ಜಿಪಿಆರ್

## ಅರ್ಜಿ ಆಹ್ವಾನ

**ಬೆಂಗಳೂರು, ಮಾರ್ಚ್ 17, (ಕರ್ನಾಟಕ ವಾರ್ತೆ)**

ಆಪರೇಲ್ ಟ್ರೈನಿಂಗ್ ಅಂಡ್ ಡಿಸೈನ್ ಸೆಂಟರ್, ಬೆಂಗಳೂರು ಹಾಗೂ ನ್ಯಾಷನಲ್ ಬ್ಯಾಕ್ವರ್ಡ್ ಕ್ಲಾಸನ್ ಹಾಗೂ ಹಣಕಾಸು ಅಭಿವೃದ್ಧಿ ನಿಗಮ (NBCFDC) ನವದೆಹಲಿ ಇವರ ಸಹಭಾಗಿತ್ವದಲ್ಲಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಆರು ತಿಂಗಳ ಪ್ರೊಡಕ್ಷನ್ ಸೂಪರ್‌ವೈಸರೀ ಮತ್ತು ಕ್ವಾಲಿಟೀ ಕಂಟ್ರೋಲ್ ಕೋರ್ಸ್ (PSQC) ಅರ್ಜಿ ಆಹ್ವಾನಿಸಲು ಪತ್ರಿಕೆ ಪ್ರಕಟಣೆ ನೀಡಲು ತಮ್ಮಲ್ಲಿ ಕೋರುತ್ತೇವೆ. ಉಚಿತ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು ಬೆಂಗಳೂರು ನಿವಾಸಿಯಾಗಿರಬೇಕು. 18 ರಿಂದ 35 ವಯೋಮಾನದವರಾಗಿರಬೇಕು. ಆದಾಯ 1,03,000/– ಮೀರಬಾರದು, ಅರ್ಹತಾ ಎರಡನೇ ಪಿ.ಯು.ಸಿ. ಪಾಸಾಗಿರಬೇಕು. ಮೇಲಿನ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಆಪರೇಲ್ ಟ್ರೈನಿಂಗ್ ಅಂಡ್ ಡಿಸೈನ್ ಸೆಂಟರ್ – ನಂ 17 ಜಿ. 40 ನೇ ಮುಖ್ಯ, 2ನೇ ಹಂತ, ಕೈಗಾರಿಕಾ ಉಪನಗರ, ಯಶವಂತಪುರ (near M.E.I. Bus Copy) ಬೆಂಗಳೂರು – 560 022 ಈ ವಿಳಾಸಕ್ಕೆ ಖುದ್ದಾಗಿ ತಿಳಿಸಲಾದ (ದೃಢೀಕೃತ) ದಾಖಲಾತಿಗಳ 2 ಪ್ರತಿಗಳೊಂದಿಗೆ ಹಾಗೂ ಇತ್ತೀಚಿನ 5 ಭಾವಚಿತ್ರದೊಂದಿಗೆ ದಿನಾಂಕ 30–3–2015 ರೊಳಗೆ ಸಂಪರ್ಕಿಸಿ ನಿಗದಿತ ನಮೂನೆಯಲ್ಲಿ ಅರ್ಜಿಯಲ್ಲಿ ತುಂಬಿ ಅರ್ಜಿ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–41283829, 9611238944 ಸಂಪರ್ಕಿಸಬಹುದು.

ಬಾಬು:ಜಿಪಿಆರ್.